# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 296-ಎ ರಡಿಯಲ್ಲಿ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳ ಜಿಲ್ಲಾ ಪಂಚಾಯತಿಗಳಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರಿಗಳನ್ನು ನೇಮಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 749 ಗ್ರಾಪಂಅ 2016, ದಿನಾಂಕ:12.04.2017.
2. ಸರ್ಕಾರದ ಪ್ರಕಟಣೆ ಸಂಖ್ಯೆ:ಗ್ರಾಅಪ 233 ಗ್ರಾಪಂಅ 2021, ದಿನಾಂಕ:24.06.2021
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಜರುಗಿದ ಆಯ್ಕೆ ಸಮಿತಿ ಸಭಾ ನಡವಳಿ, ದಿನಾಂಕ:23.07.2021.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 296-ಎ ರಡಿಯಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರವನ್ನು ರಚಿಸಲು ಉಪಬಂಧ ಕಲ್ಪಿಸಲಾಗಿದೆ. ಅದರಂತೆ ಪ್ರಾಯೋಗಿಕವಾಗಿ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರವನ್ನು ಪೂರಕ ಸಿಬ್ಬಂದಿಯೊಂದಿಗೆ ಮತ್ತು ನೇಮಕಾತಿ ವಿಧಾನವನ್ನು ನಿಗಧಿಪಡಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ (2)ರಲ್ಲಿ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳ ಕುಂದು ಕೊರತೆ ನಿವಾರಣಾ ಪ್ರಾಧಿಕಾರಕ್ಕೆ ನೇಮಕಾತಿ ಮಾಡಲು ಸರ್ಕಾರದ ಪ್ರಕಟಣೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ:29.06.2021 ರಂದು ಪ್ರಕಟಿಸಲಾಗಿದೆ ಹಾಗೂ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು ಪ್ರಕಟಣೆಗನುಸಾರ ಸ್ವೀಕರಿಸಿದ ಅರ್ಜಿಗಳನ್ನು ಸರ್ಕಾರ ಪರಿಶೀಲಿಸಿರುತ್ತದೆ.

ಮೇಲೆ ಓದಲಾದ (3) ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಆಯ್ಕೆ ಸಮಿತಿ ಸಭೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 296-ಎ ರಡಿಯಲ್ಲಿ ಪದತ್ತವಾದ ಅಧಿಕಾರದನ್ವಯ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಗಳಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರ ಅಧಿಕಾರಿಗಳನ್ನಾಗಿ ಈ ಕೆಳಕಂಡ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ತೀರ್ಮಾನಿಸಲಾಯಿತು.

ಆದ್ದರಿಂದ ಈ ಆದೇಶ

## ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 233 ಗ್ರಾಪಂಅ 2021, ಬೆಂಗಳೂರು, ದಿನಾಂಕ:26.07.2021.

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 296-ಎ ರಡಿಯಲ್ಲಿ ಪದತ್ತವಾದ ಅಧಿಕಾರದನ್ವಯ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲಾ ಪಂಚಾಯತಿಗಳಲ್ಲಿ ಈ ಕೆಳಕಂಡವರನ್ನು ಕುಂದು ಕೊರತೆ ನಿವಾರಣಾ ಪ್ರಾಧಿಕಾರಿಯಾಗಿ ನೇಮಿಸಿ ಸರ್ಕಾರವು ಆದೇಶಿಸಿದೆ.

| ಕ್ರ. ಸಂ. | ಜಿಲ್ಲೆ | ಹೆಸರು | ವಿಳಾಸ |
|---|---|---|---|
| 1. | ಬೆಂಗಳೂರು ನಗರ | ಡಾ|| ಬೂವನಹಳ್ಳಿ ನಾಗರಾಜ್ | ನಿವೃತ್ತ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ<br>ಆಶ್ವೇಷ ನಿಲಯ, 2ನೇ ಮುಖ್ಯ ರಸ್ತೆ, 1ನೇ ಬಿ. ಕ್ರಾಸ್, ಟುಡಾ ಆಫೀಸ್ ಹತ್ತಿರ, ಆದರ್ಶ ನಗರ, ತುಮಕೂರು-572103. |
| 2. | ಕಲಬುರಗಿ | ಡಾ|| ಟಿ. ಶ್ರೀನಿವಾಸ ರೆಡ್ಡಿ | ನಿವೃತ್ತ ಅಪರ ನಿರ್ದೇಶಕರು, ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ.<br>ನಂ.2, ಶಿರಡಿನಿವಾಸ, 14ನೇ ಅಡ್ಡರಸ್ತೆ, ಭುವನೇಶ್ವರಿ ನಗರ, ಬೆಂಗಳೂರು-24. |

| | | | |
|---|---|---|---|
| 3. | ಬೆಳಗಾವಿ | ಡಾ|| ಕೆ.ಎನ್. ವಿಜಯಪ್ರಕಾಶ್ | ನಿವೃತ್ತ ವ್ಯವಸ್ಥಾಪಕ ನಿರ್ದೇಶಕರು, , ಡಿ. ದೇವರಾಜ್ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು. ಫ್ಲಾಟ್ ನಂ.302, ನಂ.30, ವಾರಿಜರಾಮ ಅಪಾರ್ಟ್‌ಮೆಂಟ್ಸ್, 3ನೇ ಟೆಂಪಲ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-03. |
| 4. | ಚಿಕ್ಕಮಗಳೂರು | ಶ್ರೀ ಕರಿಯಪ್ಪ ಕೆ. | ನಿವೃತ್ತ ಉಪ ಕಾರ್ಯದರ್ಶಿ, (ಆಯ್ಕೆ ಶ್ರೇಣಿ) ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ನಂ.7, ಅಮ್ಮಾಜಿ ಕೃಪ, ಆದರ್ಶ ನಗರ, ಬೆಳಗುಂಬ ರಸ್ತೆ, ಟೂಡಾ ಕಛೇರಿ ಎದುರು, ತುಮಕೂರು-03. |

ಈ ಮೇಲ್ಕಂಡ ಕುಂದುಕೊರತೆ ನಿವಾರಣಾ ಪ್ರಾಧಿಕಾರಕ್ಕೆ ನೇಮಿಸಲಾದ ಅಧಿಕಾರಿಗಳು ಮೂಲ ದಾಖಲಾತಿಗಳೊಂದಿಗೆ ದಿನಾಂಕ:02.08.2021 ರಂದು ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಮುಂದು ಕರ್ತವ್ಯಕ್ಕೆ ಹಾಜರಾಗಲು ತಿಳಿಸಲಾಗಿದೆ.

ಸದರಿಯವರ ವೇತನ ಮತ್ತು ಭತ್ಯೆಗಳ ಬಗ್ಗೆ ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

28.7.2021

(ಎಲ್. ಕೆ. ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
2. ಡಾ|| ಬೂವನಹಳ್ಳಿ ನಾಗರಾಜ್, ನಿವೃತ್ತ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಆಶ್ಲೇಷ ನಿಲಯ, 2ನೇ ಮುಖ್ಯ ರಸ್ತೆ, 1ನೇ ಬಿ. ಕ್ರಾಸ್, ಟುಡಾ ಆಫೀಸ್ ಹತ್ತಿರ, ಆದರ್ಶ ನಗರ, ತುಮಕೂರು-572103.
3. ಡಾ|| ಟಿ. ಶ್ರೀನಿವಾಸ ರೆಡ್ಡಿ, ನಿವೃತ್ತ ಅಪರ ನಿರ್ದೇಶಕರು, ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ. ನಂ.2, ಶಿರಡಿನಿವಾಸ, 14ನೇ ಅಡ್ಡರಸ್ತೆ, ಭುವನೇಶ್ವರಿ ನಗರ, ಬೆಂಗಳೂರು-24.
4. ಡಾ|| ಕೆ.ಎನ್. ವಿಜಯಪ್ರಕಾಶ್, ನಿವೃತ್ತ ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ್ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು. ಫ್ಲಾಟ್ ನಂ.302, ನಂ.30, ವಾರಿಜರಾಮ ಅಪಾರ್ಟ್‌ಮೆಂಟ್ಸ್, 3ನೇ ಟೆಂಪಲ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-03.
5. ಶ್ರೀ ಕರಿಯಪ್ಪ ಕೆ., ನಿವೃತ್ತ ಉಪ ಕಾರ್ಯದರ್ಶಿ, (ಆಯ್ಕೆ ಶ್ರೇಣಿ) ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ನಂ.7, ಅಮ್ಮಾಜಿ ಕೃಪ, ಆದರ್ಶ ನಗರ, ಬೆಳಗುಂಬ ರಸ್ತೆ, ಟೂಡಾ ಕಛೇರಿ ಎದುರು, ತುಮಕೂರು-572103.
6. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು.
8. ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ತಾಲ್ಲೂಕು ಪಂಚಾಯಿತಿಗಳು.
9. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯತಿಗಳು (ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಗಳು:**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ-ಈ ಆದೇಶವನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸಲು ಕೋರಿದೆ.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಜಿ.ಪಂ.), ವಿಧಾನಸೌಧ, ಬೆಂಗಳೂರು.
4. ನಿರ್ದೇಶಕರು (ಪಂ.ರಾಜ್-1) ಮತ್ತು ನಿರ್ದೇಶಕರು (ಪಂ.ರಾಜ್-2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಅಧೀನ ಕಾರ್ಯದರ್ಶಿ, (ಸೇವೆಗಳು-ಎ, ಬಿ ಮತ್ತು ಸಿ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ. ರಸ್ತೆ, ಬೆಂಗಳೂರು.
8. ಇ-ಆಡಳಿತ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಸಂಪಾದಕರು, ಕರ್ನಾಟಕ ವಿಕಾಸ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
10. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 233 ಗ್ರಾಪಂಅ 2021

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:27.07.2021

# ತಿದ್ದುಪಡಿ

ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 233 ಗ್ರಾಪಂಅ 2021, ಬೆಂಗಳೂರು, ದಿನಾಂಕ:26.07.2021ರ ಆದೇಶದ ಪ್ರಸ್ತಾವನೆ ಹಾಗೂ ಆದೇಶ ಭಾಗದಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರಕ್ಕೆ ನೇಮಿಸಲಾದ ಅಧಿಕಾರಿಗಳು ಮೂಲ ದಾಖಲೆಗಳೊಂದಿಗೆ **ದಿನಾಂಕ:02.08.2021 ರಂದು** ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಮುಂದೆ ಕರ್ತವ್ಯಕ್ಕೆ ಹಾಜರಾಗಲು ತಿಳಿಸಲಾಗಿದೆ ಎಂಬುದರ ಬದಲಾಗಿ **ದಿನಾಂಕ:02.08.2021 ರೊಳಗೆ** ಕರ್ತವ್ಯಕ್ಕೆ ಹಾಜರಾಗಲು ತಿಳಿಸಲಾಗಿದೆ ಎಂಬುದಾಗಿ ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

27/7/2021

(ಎಲ್. ಕೆ. ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
2. ಡಾ|| ಬೂವನಹಳ್ಳಿ ನಾಗರಾಜ್, ನಿವೃತ್ತ ನಿರ್ದೇಶಕರು, ಗ್ರಾಮೀಣಾಭಿವೃದ್ಧಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಆಶ್ಲೇಷ ನಿಲಯ, 2ನೇ ಮುಖ್ಯ ರಸ್ತೆ, 1ನೇ ಬಿ. ಕ್ರಾಸ್, ಟುಡಾ ಆಫೀಸ್ ಹತ್ತಿರ, ಆದರ್ಶ ನಗರ, ತುಮಕೂರು-572103.
3. ಡಾ|| ಟಿ. ಶ್ರೀನಿವಾಸ ರೆಡ್ಡಿ, ನಿವೃತ್ತ ಅಪರ ನಿರ್ದೇಶಕರು, ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ. ನಂ.2, ಶಿರಡಿನಿವಾಸ, 14ನೇ ಅಡ್ಡರಸ್ತೆ, ಭುವನೇಶ್ವರಿ ನಗರ, ಬೆಂಗಳೂರು-24.
4. ಡಾ|| ಕೆ.ಎನ್. ವಿಜಯಪ್ರಕಾಶ್, ನಿವೃತ್ತ ವ್ಯವಸ್ಥಾಪಕ ನಿರ್ದೇಶಕರು, ಡಿ. ದೇವರಾಜ್ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು. ಫ್ಲಾಟ್ ನಂ.302, ನಂ.30, ವಾರಿಜರಾಮ ಅಪಾರ್ಟ್‌ಮೆಂಟ್ಸ್, 3ನೇ ಟೆಂಪಲ್ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-03.
5. ಶ್ರೀ ಕರಿಯಪ್ಪ ಕೆ., ನಿವೃತ್ತ ಉಪ ಕಾರ್ಯದರ್ಶಿ, (ಆಯ್ಕೆ ಶ್ರೇಣಿ) ಜಿಲ್ಲಾ ಪಂಚಾಯತ್, ಬೆಂಗಳೂರು ಗ್ರಾಮಾಂತರ ನಂ.7, ಅಮ್ಮಾಜಿ ಕೃಪ, ಆದರ್ಶ ನಗರ, ಬೆಳಗುಂಬ ರಸ್ತೆ, ಟೂಡಾ ಕಛೇರಿ ಎದುರು, ತುಮಕೂರು-572103.
6. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು.
8. ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ತಾಲ್ಲೂಕು ಪಂಚಾಯಿತಿಗಳು.
9. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಬೆಂಗಳೂರು ನಗರ, ಕಲಬುರಗಿ, ಬೆಳಗಾವಿ ಮತ್ತು ಚಿಕ್ಕಮಗಳೂರು ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಎಲ್ಲಾ ಗ್ರಾಮ ಪಂಚಾಯತಿಗಳು (ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಗಳು:**

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ-ಈ ಆದೇಶವನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸಲು ಕೋರಿದೆ.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಜಿ.ಪಂ.), ವಿಧಾನಸೌಧ, ಬೆಂಗಳೂರು.
4. ನಿರ್ದೇಶಕರು (ಪಂ.ರಾಜ್-1) ಮತ್ತು ನಿರ್ದೇಶಕರು (ಪಂ.ರಾಜ್-2) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಅಧೀನ ಕಾರ್ಯದರ್ಶಿ, (ಸೇವೆಗಳು-ಎ, ಬಿ ಮತ್ತು ಸಿ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ. ರಸ್ತೆ, ಬೆಂಗಳೂರು.
8. ಇ-ಆಡಳಿತ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9. ಸಂಪಾದಕರು, ಕರ್ನಾಟಕ ವಿಕಾಸ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
10. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.